# Vachanas for Kids

ತಂದೆ ನೀನು ತಾಯಿ ನೀನು
ಬಂಧು ನೀನು ಬಳಗ ನೀನು
ನೀನಲ್ಲದೆ ಮತ್ತಾರೂ ಇಲ್ಲವಯ್ಯಾ
ಕೂಡಲಸಂಗಮದೇವಾ - ಗುರು ಬಸವಣ್ಣನವರು

ದೇವಲೋಕ ಮರ್ತ್ಯಲೋಕವೆಂಬುದು ಬೇರಿಲ್ಲ, ಕಾಣಿರೋ !
ಸತ್ಯವ ನುಡಿವುದೇ ದೇವಲೋಕ, ಮಿಥ್ಯವ ನುಡಿವುದೇ ಮರ್ತ್ಯಲೋಕ. ಆಚಾರವೆ ಸ್ವರ್ಗ, ಅನಾಚಾರವೆ ನರಕ.
ಕೂಡಲಸಂಗಮದೇವಾ, ನೀವೆ ಪ್ರಮಾಣು.

## How to Commincate and importance of communicaiton.

ನುಡಿದಡೆ ಮುತ್ತಿನ ಹಾರದಂತಿರಬೇಕು.
ನುಡಿದಡೆ ಮಾಣಿಕ್ಯದ ದೀಪ್ತಿಯಂತಿರಬೇಕು.
ನುಡಿದಡೆ ಸ್ಫಟಿಕದ ಸಲಾಕೆಯಂತಿರಬೇಕು.
ನುಡಿದಡೆ ಲಿಂಗ ಮೆಚ್ಚಿ ಅಹುದಹುದನಬೇಕು.
ನುಡಿಯೊಳಗಾಗಿ ನಡೆಯದಿದ್ದಡೆ,
ಕೂಡಲಸಂಗಮದೇವನೆಂತೊಲಿವನಯ್ಯಾ-ಸವಸ-೧/೨೬೦

If spoken, must be like string of pearls.
If spoken, must be like luster of ruby
If spoken, must be like translucent crystal
If spoken, linga must say yes, yes in acceptance.
If you speak but do not act bound by it
how will Koodalasangamadeva cherish you? -Guru Basava/260

## Power of knowledge

ಜ್ಞಾನದ ಬಲದಿಂದ ಅಜ್ಞಾನದ ಕೇಡು ನೋಡಯ್ಯಾ,
ಜ್ಯೋತಿಯ ಬಲದಿಂದ ತಮಂಧದ ಕೇಡು ನೋಡಯ್ಯಾ,
ಸತ್ಯದ ಬಲದಿಂದ ಅಸತ್ಯದ ಕೇಡು ನೋಡಯ್ಯಾ,
ಪರುಷದ ಬಲದಿಂದ ಅವಲೋಹದ ಕೇಡು ನೋಡಯ್ಯಾ,
ಕೂಡಲಸಂಗನ ಶರಣರ ಅನುಭಾವದ ಬಲದಿಂದ
ಎನ್ನ ಭವದ ಕೇಡು ನೋಡಯ್ಯಾ.-ಸವಸ-೧/೨೪೨

Downloaded from: **http://lingayatreligion.com**

# Self Correction before trying to point out to others

ಲೋಕದ ಡೊಂಕ ನೀವೇಕೆ ತಿದ್ದುವಿರಿ
ನಿಮ್ಮ ನಿಮ್ಮ ತನುವ ಸಂತೈಸಿಕೊಳ್ಳಿ;
ನಿಮ್ಮ ನಿಮ್ಮ ಮನವ ಸಂತೈಸಿಕೊಳ್ಳಿ.
ನೆರೆಮನೆಯ ದುಃಖಕ್ಕೆ ಅಳುವವರ ಮೆಚ್ಚ
ಕೂಡಲಸಂಗಮದೇವ. -ಸವಸ-೧/೧೨೪

ಪರ ಚಿಂತೆ ಎಮಗೇಕಯ್ಯಾ ನಮ್ಮ ಚಿಂತೆ ನಮಗೆ ಸಾಲದೆ
ಕೂಡಲಸಂಗಯ್ಯ ಒಲಿದಾನೊ ಒಲ್ಲನೊ ಎಂಬ ಚಿಂತೆ
ಹಾಸಲುಂಟು, ಹೊದೆಯಲುಂಟು.-ಸವಸ-೧/೫೧೯

ತನಗೆ ಮುನಿವವರಿಗೆ ತಾ ಮುನಿಯಲೇಕಯ್ಯಾ
ತನಗಾದ ಆಗೇನು ಅವರಿಗಾದ ಚೇಗೆಯೇನು
ತನುವಿನ ಕೋಪ ತನ್ನ ಹಿರಿಯತನದ ಕೇಡು.
ಮನದ ಕೋಪ ತನ್ನ ಅರಿವಿನ ಕೇಡು.
ಮನೆಯೊಳಗಣ ಕಿಚ್ಚು ಮನೆಯ ಸುಟ್ಟಲ್ಲದೆ
ನೆರೆಮನೆಯ ಸುಡದು ಕೂಡಲಸಂಗಮದೇವಾ.-ಸವಸ-೧/೨೪೮

Why worry about others?
Aren't they enough, our own worries?
Whether Koodalasangamadeva loves or not
is worry enough to spread across and cover myself
-Guru Basava/268

Why attempt to straighten the crookedness of the world?
Console your body, console your mind.
Koodalasangamadeva will not appreciate
those who weep for the sake of neighbors.
-Guru Basava/352

Why feel anger for those who resent you?
What do you gain from it? What do they lose from it?
Anger shown destroys one's status.
Anger retained in the mind destroys one's knowledge.
Flame set in your house destroys youi own house
and not the neighbor's, Koodalasangamadeva.
-Guru Basava/208

Downloaded from: **http://lingayatreligion.com**

## ಹೊನ್ನು ಹೆಣ್ಣು ಮಣ್ಣು ಮಾಯೆಯಲ್ಲ.. ಅಲ್ಲಮ ಪ್ರಭುಗಳ ವಚನ

ಹೊನ್ನು ಮಾಯೆಯೆಂಬರು,
ಹೆಣ್ಣು ಮಾಯೆಯೆಂಬರು,
ಮಣ್ಣು ಮಾಯೆಯೆಂಬರು
ಹೊನ್ನು ಹೆಣ್ಣು ಮಣ್ಣು ಮಾಯೆಯಲ್ಲ
ಮನದ ಮುಂದಣ ಆಶೆಯೇ ಮಾಯೆ ಕಾಣ ಗುಹೇಶ್ವರ ||

## ಉತ್ತಮ ಜೀವನಕ್ಕಾಗಿ ಬಸವಣ್ಣನವರ ಸಪ್ತಸೂತ್ರಗಳು (For a better life Basava's seven principles)

ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ,
ಮುನಿಯ ಬೇಡ, ಅನ್ಯರಿಗೆ ಅಸಹ್ಯಪಡಬೇಡ,
ತನ್ನ ಬಣ್ಣಿಸಬೇಡ, ಇದಿರ ಹಳಿಯಲು ಬೇಡ,
ಇದೇ ಅಂತರಂಗ ಶುದ್ಧಿ! ಇದೆ ಬಹಿರಂಗ ಶುದ್ಧಿ!
ಇದೆ ನಮ್ಮ ಕೂಡಲಸಂಗಮದೇವರನೊಲಿಸುವ ಪರಿ. -ವಿಶ್ವಗುರು ಬಸವಣ್ಣ

ಅಸಹ್ಯ = disgust, ಹೇಸಿಗೆ ಹಳಿ = ದೂಸಿಸು, ನಿಂದಿಸು, scold, reprehend,
ಸಾಮಾಜಿಕ ಸಮಾನತೆ (Social equality)

## Human Equality

ಇವನಾರವ ಇವನಾರವ ಇವನಾರವ ನೆಂದಿನಸದಿರಯ್ಯಾ
ಇವನಮ್ಮವ ಇವನಮ್ಮವ ಇವನಮ್ಮವ ನೆಂದಿನಸಯ್ಯಾ
ಕೂಡಲಸಂಗಮದೇವಾ ನಿಮ್ಮ ಮಹಾಮನೆಯ ಮಗನೆಂದನಿಸಯ್ಯ. -ವಿಶ್ವಗುರು ಬಸವಣ್ಣ

ಮಹಾಮನೆ = world, universe, ಪ್ರಪಂಚ, ಭೂಮಿ, ಭೂಲೋಕ

ನೆಲನೊಂದೆ ಹೊಲಗೇರಿ ಶಿವಾಲಯಕ್ಕೆ
ಜಲವೊಂದೆ ಶೌಚಾಚಮನಕ್ಕೆ
ಕುಲವೊಂದೆ ತನ್ನ ತಾನರಿದವಂಗೆ
ಫಲವೊಂದೆ ಷಡುದರುಶನ ಮುಕ್ತಿಗೆ
ನಿಲುವೊಂದೆ ಕೂಡಲ ಸಂಗಮದೇವಾ ನಿಮ್ಮನರಿದವಂಗೆ. -ಬಸವಣ್ಣ ಸವಸ-1/879

ಬೆಟ್ಟದ ಮೇಲೊಂದು ಮನೆಯ ಮಾಡಿ ಮೃಗಗಳಿಗಂಜಿದೊಡೆಂತಯ್ಯ?
ಸಮುದ್ರದ ತಡಿಯಲೊಂದು ಮನೆಯ ಮಾಡಿ ನೊರೆತೆರೆಗಳಿಗಂಜಿದೊಡೆಂತಯ್ಯ?
ಸಂತೆಯೊಳಗೊಂದು ಮನೆಯ ಮಾಡಿ ಶಬ್ದಕ್ಕೆ ನಾಚಿದೊಡೆಂತಯ್ಯ?
ಚೆನ್ನಮಲ್ಲಿಕಾರ್ಜುನದೇವ ಕೇಳಯ್ಯ ಈ ಲೋಕದೊಳಗೆ ಹುಟ್ಟಿದ ಬಳಿಕ
ಸ್ತುತಿ-ನಿಂದೆಗಳು ಬಂದರೆ ಮನದಲ್ಲಿ ಕೋಪವ ತಾಳದೆ ಸಮಾಧಾನಿಯಾಗಿರಬೇಕು. -ಆಕ್ಕಮಹಾದೇವಿ

Downloaded from: **http://lingayatreligion.com**

## **ತಂದೆ, ತಾಯಿ ಗುರುವಿನ ಮಹತ್ವ (importance of parents and a Guru [Teacher])**

ವಿದ್ಯೆ ಕಲಿಸದ ತಂದೆ, ಬುದ್ಧಿ ಹೇಳದ ಗುರು,
ಬಿದ್ದಿರಲು ಬಂದು ನೋಡದ ತಾಯಿ
ಶುದ್ಧ ವೈರಿಗಳು ಸರ್ವಜ್ಞ||

ವೈರಿ = ಶತ್ರು, enemy, foe

## **ದಾನದ ಮಹತ್ವ (Importance of sharing/donation)**

ಕೊಟ್ಟದ್ದು ತನಗೆ, ಬಚ್ಚಿಟ್ಟದ್ದು ಪರರಿಗೆ,
ಕೊಟ್ಟು ತಾ ಕೆಟ್ಟೆನೆನಬೇಡ, ಮುಂದಕ್ಕೆ
ಕಟ್ಟಿಹುದು ಬುತ್ತಿ ಸರ್ವಜ್ಞ||

# **Company of Good peple (One has to be part of Company of Sharanas)**

ಸಾರ: ಸಜ್ಜನರ ಸಂಗವ ಮಾಡುವುದು,
ದೂರ ದುರ್ಜನರ ಸಂಗ ಬೇಡವಯ್ಯಾ.
ಆವ ಹಾವಾದಡೇನು? ವಿಷವೊಂದೆ,
ಅಂತವರ ಸಂಗ ಬೇಡವಯ್ಯಾ.
ಅಂತರಂಗ ಶುದ್ಧವಿಲ್ಲದವರ ಸಂಗವು
ಸಿಂಗಿ, ಕಾಳಕೂಟ ವಿಷವೊ, ಕೂಡಲಸಂಗಯ್ಯಾ.-ಸವಸ-೧/೧೧೯

ಸಾರ ಸಜ್ಜನರ ಸಂಗ ಲೇಸು ಕಂಡಯ್ಯಾ,
ದೂರ ದುರ್ಜನರ ಸಂಗವದು ಭಂಗವಯ್ಯಾ.
ಸಂಗವೆರಡುಂಟು:ಒಂದ ಹಿಡಿ, ಒಂದ ಬಿಡು,
ಮಂಗಳಮೂರ್ತಿ ನಮ್ಮ ಕೂಡಲಸಂಗನ ಶರಣರ. -ಸವಸ-೧/೧೩೪

ಮಂಡೆ ಮಾಸಿದಡೆ ಮಹಾಮಜ್ಜನವ ಮಾಡುವುದು;
ವಸ್ತ್ರ ಮಾಸಿದಡೆ ಮಡಿವಾಳಂಗಿಕ್ಕುವುದು;
ಮನದ ಮೈಲಿಗೆಯ ತೊಳೆಯಬೇಕಾದಡೆ
ಕೂಡಲಚೆನ್ನಸಂಗಯ್ಯನ ಶರಣರ ಅನುಭಾವವ ಮಾಡುವುದು/೧೪೪೨

Downloaded from: **http://lingayatreligion.com**

ಮಡಕೆಯ ಮಾಡುವಡೆ ಮಣ್ಣೆ ಮೊದಲು,
ತೊಡಿಗೆಯ ಮಾಡುವಡೆ ಹೊನ್ನೆ ಮೊದಲು,
ಶಿವಪಥವನರಿವಡೆ ಗುರುಪಥವೆ ಮೊದಲು,
ಕೂಡಲಸಂಗಮದೇವರನರಿವಡೆ
ಶರಣರ ಸಂಗವೆ ಮೊದಲು.-ಸವಸ-೧/೭೦

Come: the company of good people is fine.
Get away: the company of wicked people destroys you.
There are two kinds of company-hold on to one
and give up the other.
Always be with the auspicious sharanas of Koodalasangamadeva.
-Guru Basava/383

Come near: be in the company of good.
Go away: be far from the bad.
What does it matter which snake it is?
All have poison.
Don't be in company of such people.
Company of the wicked
who are not pure within
is the company of world destroying poison,
Koodalasangamadeva. -Guru Basava/384

If the head becomes dirty, take an oil-bath;
if the clothes become dirty, give them to a washer-man.
But if you want to cleanse the dirt in your mind,
you should commune with the spiritual experience
of Koodala Chennasanga's sharanas. -Chennabasavanna/862

Without union, there is no fire.
Without union, there is no sprouting.
Without union, there is no flower.
Without union, there is no bliss.
Chennamallikaarjunayya,
in union with those greats who have your spiritual experience
I became supremely happy. -Akkamahadevi/1227

Downloaded from: **http://lingayatreligion.com**